# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ.

**ನೇಮಕಾತಿ ಅಧಿಸೂಚನೆ ಸಂಖ್ಯೆ: 01/2024, ದಿನಾಂಕ: 24/06/2024.**

**ವಿಷಯ** : ಹಾವೇರಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 26 ಜವಾನ (GROUP-D) ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

**ಉಲ್ಲೇಖ:**

1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರದ ಸಂಖ್ಯೆ DJA-II (LCA-II)-128/2012, ದಿನಾಂಕ 27/01/2022.
2. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರದ ಸಂಖ್ಯೆ DAJ-II (LCA-II)-128/2012, ದಿನಾಂಕ 11/09/2023.
3. Karnataka Sub-ordinate Courts (District Judiciary) (Ministerial and other posts) (Recruitment) (Amendment) Rules, 2021.
4. Karnataka Sub-ordinate Courts (Ministerial and Other Posts) (Recruitment) (Amendment) Rules, 2007.
5. Karnataka Civil Services (General Recruitment) Rules 1977.
6. ಈ ನ್ಯಾಯಾಲಯದ ಕಛೇರಿ ಟಿಪ್ಪಣಿ ದಿನಾಂಕ: 24/06/2024 ಹಾಗೂ ಅದರ ಮೇಲಾದ ಆದೇಶ.

*****

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಆರಂಭಿಕ ದಿನಾಂಕ 03/07/2024 ಹಾಗೂ ಕೊನೆಯ ದಿನಾಂಕ: 01/08/2024.**

ಹಾವೇರಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ **26 "ಜವಾನ"** ಹುದ್ದೆಗಳಿಗೆ ಅರ್ಜಿಗಳನ್ನು ಸ್ವೀಕರಿಸುವುದಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಹಾವೇರಿ ಜಿಲ್ಲಾ ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://haveri.dcourts.gov.in/notice-category/recruitments/ ಅಥವಾ https://haveri.dcourts.gov.in/online-recruitment/ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

## I. ಖಾಲಿ ಹುದ್ದೆಗಳ ವರ್ಗೀಕರಣ:

| ಮೀಸಲಾತಿ | ರೋಸ್ಟರ್ ಬಿಂದು | | ವರ್ಗೀಕರಣ | | | | | |
|---|---|---|---|---|---|---|---|---|
| | ನೇರ ಮೀಸಲಾತಿ (Vertical) | ಸಮತಲ ಮೀಸಲಾತಿ (Horizontal) | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕ | **ಒಟ್ಟು** |
| ಪರಿಶಿಷ್ಟ ಜಾತಿ | 1, 9, 15 ಮತ್ತು 23 | 1, 2, 3 ಮತ್ತು 4 | 01 | 01 | 01 | 01(*) | - | **04** |
| ಸಾಮಾನ್ಯ ಅಭ್ಯರ್ಥಿ | 2, 4, 6, 8, 10, 12, 14, 16, 20, 22, 24 ಮತ್ತು 26 | 1, 2, 3, 4, 5, 6, 7, 8, 9, 10, 11 ಮತ್ತು 12 | 02 | 05 | 03 | 01(*) | 01 | **12** |
| ಪರಿಶಿಷ್ಟ ಪಂಗಡ | 3 ಮತ್ತು 18 | 1 ಮತ್ತು 2 | 01 | 01 | - | - | - | **02** |
| ಪ್ರವರ್ಗ-I | 5 | 1 | 01 | - | - | - | - | **01** |
| ಪ್ರವರ್ಗ-II ಎ | 7, 13, 21 ಮತ್ತು 25 | 1, 2, 3 ಮತ್ತು 4 | 01 | 01 | 01 | 01(*) | - | **04** |
| ಪ್ರವರ್ಗ-II ಬಿ | 11 | 1 | 01 | - | - | - | - | **01** |
| ಪ್ರವರ್ಗ-III ಎ | 17 | 1 | 01 | - | - | - | - | **01** |
| ಪ್ರವರ್ಗ-III ಬಿ | 19 | 1 | 01 | - | - | - | - | **01** |
| **ಒಟ್ಟು** | | | **09** | **08** | **05** | **03** | **01** | **26** |

(*) ದೃಷ್ಟಿಮಾಂದ್ಯತೆಯುಳ್ಳವರಿಗೆ (Blindness / Low Vision).

## II. ಶೈಕ್ಷಣಿಕ ವಿದ್ಯಾರ್ಹತೆ:

1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾಗುವ ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2) ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು (ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುವುದೇ ಎಂಬ ಕುರಿತು ಅಭ್ಯರ್ಥಿಗಳಿಗೆ ಪರೀಕ್ಷೆ ನಡೆಸಲಾಗುವುದು).

3) ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆ ಪಾಸಾದ ಕುರಿತು ಅಂಕಗಳು ಶ್ರೇಣಿಯಲ್ಲಿದ್ದರೆ (ಗ್ರೇಡ್) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಒಟ್ಟು ಪಡೆದ ಅಂಕಗಳನ್ನು ಆನ್‌ಲೈನ್ ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**III.** **ವೇತನ ಶ್ರೇಣಿಃ** 17000-400-18600-450-20400-500-22400-550-
-24600-600-27000-650-28950 ಹಾಗೂ ಇತರೆ ಭತ್ಯೆಗಳು.

**IV.** **ಸೇವಾ ಪರಿವೀಕ್ಷಣಾ ಅವಧಿಃ**

ಅಭ್ಯರ್ಥಿಯು ನೇಮಕಗೊಂಡ ಪಕ್ಷದಲ್ಲಿ, ಪ್ರಾರಂಭಿಕವಾಗಿ ಎರಡು ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

**V.** **ಆಯ್ಕೆ ವಿಧಾನಃ**

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) (ತಿದ್ದುಪಡಿ) ನಿಯಮ 2007 ಹಾಗೂ ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) (ತಿದ್ದುಪಡಿ) ನಿಯಮ 2021 ರ ಪ್ರಕಾರ.

ಕನ್ನಡ ಓದಲು ಮತ್ತು ಬರೆಯಲು ಅಭ್ಯರ್ಥಿ ಹೊಂದಿರುವ ಸಾಮರ್ಥ್ಯ ಮತ್ತು ಸಾಮಾನ್ಯ ಜ್ಞಾನದ ಬಗ್ಗೆ ಸಂದರ್ಶನ.

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳಂತೆ (1:10 ರ ಅನುಪಾತದಲ್ಲಿ) ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ. ಸದರಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದಲ್ಲಿ ಆಯ್ಕೆಗೆ ಅರ್ಹರಾಗುವುದಿಲ್ಲ.

**VI.** **ವಯೋಮಿತಿಃ**

1) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು **18 ವರ್ಷದವರಾಗಿರಬೇಕು** ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದುಃ

(i) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ಕ್ಕೆ ಸೇರಿದ ಪಕ್ಷದಲ್ಲಿ ಅವರು ಗರಿಷ್ಠ **40 ವರ್ಷ ಮೀರಿರಬಾರದು.**

(ii) ಇತರೇ ಹಿಂದುಳಿದ ವರ್ಗಗಳ ಪ್ರವರ್ಗ-II ಎ, ಪ್ರವರ್ಗ-II ಬಿ, ಪ್ರವರ್ಗ-III ಎ, ಪ್ರವರ್ಗ-III ಬಿ ಗೆ ಸೇರಿದ್ದಲ್ಲಿ ಗರಿಷ್ಠ **38 ವರ್ಷ ಮೀರಿರಬಾರದು.**

(iii) ಸಾಮಾನ್ಯ ವರ್ಗಕ್ಕೆ ಸೇರಿದ್ದಲ್ಲಿ ಗರಿಷ್ಠ **35 ವರ್ಷ ಮೀರಿರಬಾರದು.**

2) ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ 6 ನೇ ನಿಯಮದ ಅನುಸಾರ, ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಸಡಿಲಿಕೆ ಮಾಡಲಾಗುವುದು.

(i) ಅಭ್ಯರ್ಥಿಯು ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೇರೆಗೆ ಸ್ಥಾಪಿತವಾದ ಅಥವಾ ರಾಜ್ಯ ಅಥವಾ ಕೇಂದ್ರ ಅಧಿನಿಯಮದಡಿಯಲ್ಲಿ ಸರ್ಕಾರದ ಮೂಲಕ ಸ್ಥಾಪಿತವಾದ ಮತ್ತು ಸರ್ಕಾರದ ಅಧೀನದಲ್ಲಿ ಅಥವಾ ನಿಯಂತ್ರಣದಲ್ಲಿ ಇರುವ ಸರ್ಕಾರಿ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಪಕ್ಷದಲ್ಲಿ ಅಥವಾ ಯಾವುದೇ ಹುದ್ದೆಯನ್ನು ಹೊಂದಿದ್ದಲ್ಲಿ ಹಾಗೆ ಸಲ್ಲಿಸಿರುವ ಅವಧಿ ಅಥವಾ 10 ವರ್ಷ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ವಯೋಮಿತಿಯ ಸಡಿಲಿಕೆಗೆ ಅರ್ಹರಾಗಿರುತ್ತಾರೆ.

(ii) ಮಾಜಿ ಸೈನಿಕರಿಗೆ, ಕೇಂದ್ರ ಸಶಸ್ತ್ರ ಪಡೆಯಲ್ಲಿ ಅವರು ಸೇವೆ ಸಲ್ಲಿಸಿದ ಅವಧಿಯ ವರ್ಷಗಳ ಜೊತೆಗೆ ಮೂರು ವರ್ಷಗಳು ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(iii) ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(iv) ಅಭ್ಯರ್ಥಿಯು ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(v) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(vi) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ, ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(vii) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್ ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

(viii) ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ, ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

3) ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾದ ಕೊನೆಯ ದಿನಾಂಕವನ್ನು ಆಧರಿಸಿರುತ್ತದೆ. ಅಂದರೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 01/08/2024 ಅನ್ನು ಆಧರಿಸಿರುತ್ತದೆ.

## VII. ಅರ್ಜಿ ಮತ್ತು ಶುಲ್ಕವನ್ನು ಸಲ್ಲಿಸುವ ವಿಧಾನಃ

(i)

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ. | **ಶುಲ್ಕ ವಿನಾಯಿತಿ.** |
| ಪ್ರವರ್ಗ-**II** ಎ, ಪ್ರವರ್ಗ-**II** ಬಿ, ಪ್ರವರ್ಗ-**III** ಎ, ಪ್ರವರ್ಗ-**III** ಬಿ ಗೆ ಸೇರಿದ ಅಭ್ಯರ್ಥಿಗಳಿಗೆ. | **ರೂ.100/-** |
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ. | **ರೂ.200/-** |

(ii) ನಿಗದಿತ ಶುಲ್ಕವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ಅಧಿಕೃತ ವೆಬ್‌ಸೈಟ್ https://haveri.dcourts.gov.in/notice-category/recruitments/ ಅಥವಾ https://haveri.dcourts.gov.in/online-recruitment/ ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ ನಿಗದಿತ ಶುಲ್ಕವನ್ನು **Online Payment through SBI e pay modes/ Net Banking or Credit Card or Debit Card or UPI ID** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್/ ಡಿಮ್ಯಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿ ಮಾಡದೇ ಇರುವ ಸಾಮಾನ್ಯ ವರ್ಗ, ಪ್ರವರ್ಗ-II ಎ, ಪ್ರವರ್ಗ-II ಬಿ, ಪ್ರವರ್ಗ-III ಎ, ಪ್ರವರ್ಗ-III ಬಿ ಮೀಸಲಾತಿಗೆ ಸೇರಿದ ಅಂಗವಿಕಲರಲ್ಲದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(iii) ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಯಾವುದೇ ಸಂದರ್ಭದಲ್ಲೂ ಹಿಂತಿರುಗಿಸಲಾಗುವುದಿಲ್ಲ.

## VIII. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಪಾಲಿಸಬೇಕಾದ ಸೂಚನೆಗಳುಃ

(1) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವುದರಲ್ಲಿ ಆಗಬಹುದಾದ ತಪ್ಪುಗಳನ್ನು ತಡೆಯುವುದಕ್ಕಾಗಿ ಅರ್ಜಿ ಸಲ್ಲಿಸುವುದಕ್ಕಿಂತ ಮೊದಲು ಕೆಳಗೆ ನಮೂದಿಸಿರುವ ಎಲ್ಲಾ ಸೂಚನೆಗಳನ್ನು ಎಚ್ಚರಿಕೆಯಿಂದ ಓದಿಕೊಳ್ಳತಕ್ಕದ್ದು.

(2) ಅರ್ಜಿಯಲ್ಲಿ ಸಂಪರ್ಕದ ಉದ್ದೇಶಕ್ಕೆ ಸಂಬಂಧಿಸಿದಂತೆ ಕೊಟ್ಟಿರುವ ಸೂಕ್ತ ಕಾಲಂಗಳನ್ನು ತುಂಬುವಾಗ ಸಂವಹನಕ್ಕಾಗಿ **ಮೊಬೈಲ್ ನಂಬರ** ಮತ್ತು **ಇ-ಮೇಲ್ ಐ.ಡಿ.**ಯನ್ನು ಕಡ್ಡಾಯವಾಗಿ ಸರಿಯಾಗಿ ನಮೂದಿಸತಕ್ಕದ್ದು. ಒಂದು ವೇಳೆ ಎಸ್.ಎಂ.ಎಸ್. ಅಥವಾ ಇ-ಮೇಲ್ ಸಂದೇಶ ತಲುಪದಿದ್ದಲ್ಲಿ ಪ್ರಾಧಿಕಾರ ಹೊಣೆಯಾಗುವುದಿಲ್ಲ.

(3) ಕೊನೆ ಕ್ಷಣದಲ್ಲಿ ಅರ್ಜಿ ಸಲ್ಲಿಸುವಾಗ ಆಗಬಹುದಾದ ಒತ್ತಡವನ್ನು ತಪ್ಪಿಸಲು, ಅಭ್ಯರ್ಥಿಗಳು ಸಾಕಷ್ಟು ಮುಂಚಿತವಾಗಿಯೇ ಅರ್ಜಿ ಸಲ್ಲಿಸುವುದು ಸೂಕ್ತ. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ದಿನಾಂಕ 01/08/2024ರ ರಾತ್ರಿ 11-59 ಘಂಟೆಯೊಳಗೆ ಸಲ್ಲಿಸಿದ ಅರ್ಜಿಗಳನ್ನಷ್ಟೇ ಅಂಗೀಕರಿಸುತ್ತದೆ.

(4) ಸಂದರ್ಶನಕ್ಕಾಗಿ ಅಂಗೀಕರಿಸಿದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

(5) ಅರ್ಹ ಅಭ್ಯರ್ಥಿಗಳ ಮೊಬೈಲ್‌ಗೆ ಸಂದೇಶವನ್ನು ಕಳುಹಿಸುವ ಮೂಲಕ ಅಥವಾ ಇ-ಮೇಲ್ ವಿಳಾಸ ನೀಡಿದ್ದಲ್ಲಿ ಇ-ಮೇಲ್ ಮೂಲಕ ಮಾಹಿತಿಯನ್ನು ನೀಡಲಾಗುವುದು. **'ಕರೆ ಪತ್ರ'**ವನ್ನು ಡೌನ್‌ಲೋಡ್ ಮಾಡಿಕೊಳ್ಳುವುದಕ್ಕಾಗಿ, ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಂದರ್ಶನಕ್ಕಾಗಿ ಅಂಗೀಕರಿಸಿದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ವೆಬ್‌ಸೈಟ್‌ನಲ್ಲಿಯೂ ಸಹ ಅಧಿಸೂಚಿಸಲಾಗುವುದು. ಅಭ್ಯರ್ಥಿಯು ಸಂದರ್ಶನದ ಸಮಯದಲ್ಲಿ ಆತನ/ಆಕೆಯ **'ಕರೆ ಪತ್ರ'**ವನ್ನು ತರತಕ್ಕದ್ದು.

(6) ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವಾಗ ಅಭ್ಯರ್ಥಿಯು ಗರಿಷ್ಠ 50 ಕೆ.ಬಿ. ಅಳತೆಯಿರುವ 5 ಸೆಂ.ಮೀ. ಉದ್ದ X 3.6 ಸೆಂ.ಮೀ. ಅಗಲವಿರುವ ತನ್ನ ಇತ್ತೀಚಿನ ಕಲರ್ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಸ್ಕ್ಯಾನ್ ಮಾಡತಕ್ಕದ್ದು ಹಾಗೂ **ಜೆಪಿಜಿ** ನಮೂನೆಯಲ್ಲಿ ಬಿಳಿ ಕಾಗದದ ಮೇಲೆ ಕಪ್ಪು ಬಾಲ್ ಪಾಯಿಂಟ್ ಪೆನ್‌ನಲ್ಲಿ (2.5 ಸೆಂ.ಮೀ. ಉದ್ದ X 7.5 ಸೆಂ.ಮೀ. ಅಗಲವಿರುವ ಗರಿಷ್ಠ 25 ಕೆ.ಬಿ. ಪ್ರಮಾಣವಿರುವಂತೆ) ತಮ್ಮ ಸಹಿ ಮಾಡಿ ಸ್ಕ್ಯಾನ್ ಮಾಡತಕ್ಕದ್ದು ಹಾಗೂ ಅದನ್ನು ಅಪ್‌ಲೋಡ್ ಮಾಡತಕ್ಕದ್ದು **ಜೆಪಿಜಿ ಭಾವಚಿತ್ರವು ಸ್ಪಷ್ಟವಾಗಿರಬೇಕು.**

(7) ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳಲ್ಲಿ ಗರಿಷ್ಠ ಅಂಕಗಳನ್ನು ಹಾಗೂ ಶೇಕಡಾವಾರು ಅಂಕಗಳನ್ನು ನಮೂದಿಸಬೇಕು.

(8) ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನೂ ತಪ್ಪದೇ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಅಭ್ಯರ್ಥಿಯು ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸಲು ಕೋರಿದಾಗ ಹಾಜರುಪಡಿಸತಕ್ಕದ್ದು.

(9) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ಅಧಿಕೃತ ವೆಬ್‌ಸೈಟ್ https://haveri.dcourts.gov.in/notice-category/recruitments/ **ಅಥವಾ** https://haveri.dcourts.gov.in/online-recruitment/ ನಲ್ಲಿ ದಿನಾಂಕ 01/08/2024 ರ ರಾತ್ರಿ 11-59 ರವರೆಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ ಮತ್ತು ಅರ್ಜಿ ಶುಲ್ಕ ಪಾವತಿಸಲು ಕಡೆಯ ದಿನಾಂಕ 02/08/2024 ರ ರಾತ್ರಿ 11-59 ರವರೆಗೆ ಅವಕಾಶವಿರುತ್ತದೆ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

(10) ಆನ್‌ಲೈನ್ ಹೊರತು ಪಡಿಸಿ ಇತರೇ ಯಾವುದೇ ವಿಧಾನದಲ್ಲಿ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## IX. ಮೀಸಲಾತಿ ಕೋರುವ ಅಭ್ಯರ್ಥಿಗಳು:

(1) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I, ಪ್ರವರ್ಗ-II ಎ, ಪ್ರವರ್ಗ-II ಬಿ, ಪ್ರವರ್ಗ-III ಎ, ಪ್ರವರ್ಗ-III ಬಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಕರ್ನಾಟಕ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಮತ್ತು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರುಪಡಿಸುವುದು.

(2) **'ಅಂಗವಿಕಲ'** ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣಪತ್ರವನ್ನು ದಿನಾಂಕ 19/11/2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸನೆನಿ/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರುಪಡಿಸುವುದು.

(3) **'ಮಾಜಿ ಸೈನಿಕ'** ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರುಪಡಿಸುವುದು.

(4) **'ಗ್ರಾಮೀಣ ಅಭ್ಯರ್ಥಿ'** ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿರತಕ್ಕದ್ದು. ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 96 ಸೇನೆನಿ 2005 ದಿನಾಂಕ 10/08/2005ರನ್ವಯ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲುರುಜುವಿನೊಂದಿಗೆ ನಿಗದಿಪಡಿಸಿದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರುಪಡಿಸುವುದು. ಅದರಂತೆ ಗ್ರಾಮೀಣ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವಂತಹ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 8 ಸೇನೆನಿ 2001, ದಿನಾಂಕ 13/02/2001ರನ್ವಯ ನಮೂನೆ-1ರಂತೆ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರವನ್ನೂ ಸಹ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರುಪಡಿಸುವುದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗಿರುತ್ತಾರೆ.

(5) ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು

**X.** ದಾಖಲೆಗಳ ಪರಿಶೀಲನೆ ಹಾಗೂ ಮೌಖಿಕ ಸಂದರ್ಶನಕ್ಕೆ ಸಂಬಂಧಿಸಿದಂತೆ ಕರೆಯಲಾದ ಅಭ್ಯರ್ಥಿಗಳು ಪರಿಶೀಲನೆಗಾಗಿ ಶೈಕ್ಷಣಿಕ ವಿದ್ಯಾರ್ಹತೆ (ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆಯ ಜನ್ಮ ದಿನಾಂಕ ಹೊಂದಿರುವ ಅಂಕಪಟ್ಟಿ) ಜಾತಿ/ ಗ್ರಾಮೀಣ/ ಅಂಗವಿಕಲ/ ಮಾಜಿ ಸೈನಿಕ ಇತ್ಯಾದಿ ವೃಂದಕ್ಕಾಗಿ ಮೀಸಲಾತಿಯನ್ನು ಕೋರುವವರು ಸಂಬಂಧಿಸಿದ ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸತಕ್ಕದ್ದು

**XI.** ಅಭ್ಯರ್ಥಿಯ ಉತ್ತಮ ನಡತೆಯ ಬಗ್ಗೆ ಮೂರು ಪ್ರಮಾಣ ಪತ್ರಗಳು ಅಂದರೆ ಅವನು/ಅವಳು ಅಂತಿಮವಾಗಿ ವ್ಯಾಸಂಗ ಮಾಡಿದ ಸಂಸ್ಥೆಯ ಮುಖ್ಯಸ್ಥರಿಂದ ವಿದ್ಯಾಭ್ಯಾಸದ ವಿವರಗಳೊಂದಿಗೆ ಪಡೆದ ಒಂದು ಪ್ರಮಾಣ ಪತ್ರ ಮತ್ತು ಅವನು/ಅವಳು ಚೆನ್ನಾಗಿ ಪರಿಚಯವಿರುವ ಹಾಗೂ ಸಂಬಂಧಿಯಾಗಿರದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಎರಡು ಪ್ರಮಾಣ ಪತ್ರಗಳನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

**XII.** ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ತಿದ್ದುಪಡಿಯಾದ ನಿಯಮ 11ರ ಪ್ರಕಾರ ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ 'ಹೌದು' ಅಥವಾ 'ಇಲ್ಲ' ಎಂಬುದನ್ನು ಆಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ 'ನಿರಾಕ್ಷೇಪಣಾ ಪತ್ರ'ವನ್ನು ಒದಗಿಸತಕ್ಕದ್ದು.

**XIII.** ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

**XIV.** ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡಿದಂತಾಗುವುದಿಲ್ಲ ಮತ್ತು ಅಭ್ಯರ್ಥಿಯು ನೇಮಕಕ್ಕೆ ಎಲ್ಲಾ ರೀತಿಯಲ್ಲಿ ಸೂಕ್ತನಾಗಿದ್ದಾನೆ/ಳೆ ಎಂದು ಅಗತ್ಯವೆಂದು ಪರಿಗಣಿಸಬಹುದಾದ ವಿಚಾರಣೆಗಳ ನಂತರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಇವರಿಗೆ ತೃಪ್ತಿ ಹೊಂದದ ಹೊರತು ಯಾವುದೇ ಅಭ್ಯರ್ಥಿಯನ್ನು ಹುದ್ದೆಗೆ ನೇಮಿಸಲಾಗುವುದಿಲ್ಲ.

**XV.** ಜವಾನ ಹುದ್ದೆಗೆ ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯಲ್ಲಾಗಲೀ ಅಥವಾ ಹಾವೇರಿ ಜಿಲ್ಲೆಯಲ್ಲಿರುವ ಇತರೇ ತಾಲೂಕು ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನ್ಯಾಯಾಲಯಗಳಿಗೆ ನಿಯೋಜಿಸಬಹುದು.

**XVI.** ಪಿಂಚಣಿ ಸೌಲಭ್ಯಃ ಸರ್ಕಾರದ ಆದೇಶ ಸಂಖ್ಯೆಃ ಎಫ್‌ಡಿ (ಎಸ್‌ಸಿಎಲ್) 04 ಪಿಇಟಿ 2005, ದಿನಾಂಕ 31/03/2006 ರಂತೆ.

**XVII.** ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು/ ಅಭ್ಯರ್ಥಿಕೆಯನ್ನು ಅನರ್ಹಗೊಳಿಸಲಾಗುವುದು.

**XVIII.** ಪರಿಶೀಲನೆಯ ಯಾವುದೇ ಸಮಯದಲ್ಲಿ ಅಥವಾ ನೇಮಕಾತಿಯ ಯಾವುದೇ ಹಂತದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ಒದಗಿಸಿದ ಮಾಹಿತಿಯು ಸುಳ್ಳು ಎಂದು ಕಂಡು ಬಂದರೆ ಅಥವಾ ಅಭ್ಯರ್ಥಿಯು ಯಾವುದೇ ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ ಅಥವಾ ಅವನ/ಅವಳ ಯಾವುದೇ ವಸ್ತುನಿಷ್ಠ ಸತ್ಯಗಳನ್ನು ತಿರುಚಿದರೆ ಅಥವಾ ಮೊಟಕುಗೊಳಿಸಿದರೆ, ಅವನ/ಅವಳ ಉಮೇದುವಾರಿಕೆಯನ್ನು ರದ್ದುಗೊಳಿಸಲಾಗುತ್ತದೆ. ನೇಮಕಾತಿಯ ನಂತರವೂ ಅಂತಹ ಯಾವುದೇ ನ್ಯೂನ್ಯತೆಗಳು ಕಂಡು ಬಂದರೆ, ಅವನ/ಅವಳ ನೇಮಕಾತಿಯನ್ನು ಕೊನೆಗೊಳಿಸಲಾಗುವುದು. ತಪ್ಪು ಅಪೂರ್ಣ ಅಥವಾ ತಪ್ಪಾದ ಮಾಹಿತಿಯನ್ನು ಒದಗಿಸುವುದು ಅಭ್ಯರ್ಥಿಯ ಅನರ್ಹತೆಗೆ ಕಾರಣವಾಗುವುದಲ್ಲದೆ ಅಂತಹ ಮಾಹಿತಿಯನ್ನು ಒದಗಿಸಿದ್ದಕ್ಕಾಗಿ ಕ್ರಿಮಿನಲ್ ಮೊಕದ್ದಮೆಗೆ ಹೊಣೆಗಾರನಾಗುತ್ತಾನೆ/ಳೆ.

24/6/24

ಸ್ಥಳ: ಹಾವೇರಿ.
ದಿನಾಂಕ: 24/06/2024.

(ಕೆ.ಸಿ. ಸದಾನಂದಸ್ವಾಮಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಹಾವೇರಿ.

**ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ:**

1) ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖ ಪತ್ರದೊಂದಿಗೆ.

**ಪ್ರತಿಯನ್ನು:**

2) ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಬೆಂಗಳೂರು ಗ್ರಾಮಾಂತರ ಜಿಲ್ಲೆ/ ಬೆಳಗಾವಿ/ ಬಳ್ಳಾರಿ/ ಬೀದರ/ ಬಾಗಲಕೋಟ/ ವಿಜಯಪುರ/ ಚಾಮರಾಜನಗರ/ ಚಿಕ್ಕಮಗಳೂರು/ ಚಿಕ್ಕಬಳ್ಳಾಪುರ/ ಚಿತ್ರದುರ್ಗ/ ದಾವಣಗೆರೆ/ ಧಾರವಾಡ/ ಗದಗ/ ಕಲಬುರಗಿ/ ಹಾಸನ/ ಕೋಲಾರ/ ಕೊಪ್ಪಳ/ ಕೊಡಗು-ಮಡಿಕೇರಿ/ ಮಂಡ್ಯ/ ಮೈಸೂರು/ ಮಂಗಳೂರು/ ರಾಯಚೂರು/ ರಾಮನಗರ/ ಶಿವಮೊಗ್ಗ/ ತುಮಕೂರು/ ಉಡುಪಿ/ ಉತ್ತರ ಕನ್ನಡ/ ಯಾದಗಿರಿ ಇವರಿಗೆ (ಇ-ಮೇಲ್ ಮೂಲಕ) ಮಾಹಿತಿಗಾಗಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

3) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಹಾವೇರಿ, ಇವರಿಗೆ ಮಾಹಿತಿಗಾಗಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

4) ಹಾವೇರಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ನ್ಯಾಯಾಲಯಗಳಿಗೆ ಮಾಹಿತಿಗಾಗಿ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸಲು ಇ-ಮೇಲ್ ಮೂಲಕ ಕಳುಹಿಸಲಾಗಿದೆ.

5) ಸಾಫ್ಟ್‌ವೇರ್ ಟೆಕ್ನಿಷಿಯನ್, ಕಂಪ್ಯೂಟರ್ ವಿಭಾಗ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ.

6) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ಸೂಚನಾ ಫಲಕಕ್ಕೆ.